# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 113 |
| ಸದಸ್ಯರ ಹೆಸರು | : | ಶ್ರೀ ಟಿ.ಎ.ಶರವಣ(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 05.12.2023 |
| ಉತ್ತರಿಸುವ ಸಚಿವರು | : | ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರವು ಜಾರಿಗೆ ತಂದಿದ್ದ ಎ.ಪಿ.ಎಂ.ಸಿ ಕಾಯಿದೆಯನ್ನು ರದ್ದು ಮಾಡಿ, ಹಳೆಯ ಕಾಯಿದೆಯನ್ನು ಮರು ಸ್ಥಾಪಿಸುವ ಬಗ್ಗೆ, ಸರ್ಕಾರ ಕೈಗೊಂಡ ಕ್ರಮಗಳೇನು; | ರಾಜ್ಯ ಸರ್ಕಾರವು ಮಾರುಕಟ್ಟೆ ಪ್ರಾಂಗಣಗಳ ಹೊರಗಡೆ ಮಾರುಕಟ್ಟೆ ಕ್ಷೇತ್ರದಲ್ಲಿ ನಡೆಯುವ ವಹಿವಾಟಿನ ಮೇಲೆ ಈ ಮೊದಲಿನಂತೆ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳು ನಿಯಂತ್ರಣವನ್ನು ಹೊಂದುವುದು ರೈತ ಬೆಳೆಗಾರರ ಹಿತದೃಷ್ಟಿಯಿಂದ ಮುಖ್ಯವಾಗಿರುವುದನ್ನು ಪರಿಗಣಿಸಿ ಈ ಮೊದಲಿನಂತೆ ಕಾಯ್ದೆಗೆ ತಿದ್ದುಪಡಿ ತರಲು ಪ್ರಸ್ತಾಪಿಸಲಾಗಿದ್ದು, ಅದರಂತೆ ದಿನಾಂಕ:17.07.2023 ರಂದು ನಡೆದ ವಿಧಾನ ಮಂಡಲದ ಅಧಿವೇಶನದಲ್ಲಿ ವಿಧೇಯಕವು ವಿಧಾನ ಸಭೆಯಲ್ಲಿ ಅಂಗೀಕೃತಗೊಂಡು, ದಿನಾಂಕ:18.07.2023 ರಂದು ನಡೆದ ವಿಧಾನ ಪರಿಷತ್ತಿನ ಅಧಿವೇಶನದಲ್ಲಿ ವಿಧೇಯಕವನ್ನು ಸದನ ಸಮಿತಿಯ ಪರಿಶೀಲನೆಗೆ ವಹಿಸಲು ಸದನದ ಅನುಮೋದನೆಯಾಗಿರುತ್ತದೆ.<br><br>ಮುಂದುವರೆದು, ಕರ್ನಾಟಕ ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕ 2023ನ್ನು ಸಮಗ್ರವಾಗಿ ಪರಿಶೀಲಿಸಲು ರಚಿಸಿರುವ ಪರಿಶೀಲನಾ ಸಮಿತಿಯ ಪ್ರಾರಂಭಿಕ ಸಭೆಯನ್ನು ದಿನಾಂಕ:16.10.2023ರಂದು ಶಾಸಕರ ಭವನ, ಸಮ್ಮೇಳನ ಸಭಾಂಗಣದಲ್ಲಿ ಹಾಗೂ ಸದರಿ ಪರಿಶೀಲನಾ ಸಮಿತಿಯ 2ನೇ ಸಭೆಯನ್ನು ಕೋಲಾರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ವ್ಯಾಪ್ತಿಯಲ್ಲಿನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಯವರ ಕಛೇರಿ ಸಭಾಂಗಣದಲ್ಲಿ ಹಾಗೂ ಮೂರನೇ ಸಭೆಯನ್ನು ದಿನಾಂಕ:22.11.2023 ರಂದು ಶಿವಮೊಗ್ಗದ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ನಡೆಸಲಾಗಿದ್ದು, ಪರಿಶೀಲನಾ ಸಮಿತಿಯು ಮಾರುಕಟ್ಟೆಗಳ ಅಧ್ಯಯನ ನಂತರದಲ್ಲಿ ಸದನಕ್ಕೆ ವರದಿ ಸಲ್ಲಿಸಬೇಕಿದ್ದು, ಸದರಿ ಕಾರ್ಯ ಜಾರಿಯಲ್ಲಿದೆ. |
| ಆ) | ಈ ಕ್ರಮಗಳಿಂದ ಎ.ಪಿ.ಎಂ.ಸಿ ಗಳ ಆದಾಯ ಹೆಚ್ಚಾಗ ಲಿದೆಯೆ; ಹಾಗಿದ್ದಲ್ಲಿ, ಎಷ್ಟು ಪ್ರಮಾಣದಲ್ಲಿ ಹೆಚ್ಚಾಗಿದೆ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು) | ಮಾರುಕಟ್ಟೆ ಕಾಯ್ದೆಗೆ ದಿನಾಂಕ:16.05.2023 ರಂದು ತಿದ್ದುಪಡಿ ಮಾಡಿ ಮಾರುಕಟ್ಟೆ ಸಮಿತಿಗಳ ನಿಯಂತ್ರಣವನ್ನು ಮಾರುಕಟ್ಟೆ ಪ್ರಾಂಗಣಗಳಿಗೆ ಸೀಮಿತಗೊಳಿಸಿದ್ದರ ಪರಿಣಾಮ ವಾಗಿ ಮಾರುಕಟ್ಟೆ ಪ್ರಾಂಗಣಗಳ ಹೊರಗಡೆ ಮಾರುಕಟ್ಟೆ ಕ್ಷೇತ್ರದಲ್ಲಿ ನಡೆಯುವ ವ್ಯಾಪಾರ ವಹಿವಾಟಿನ ಮೇಲೆ ಮಾರುಕಟ್ಟೆ ಸಮಿತಿಗಳು ಯಾವುದೇ ಶುಲ್ಕ, ಸೆಸ್ ವಿಧಿಸಲು ಅವಕಾಶವಿಲ್ಲದ ಪ್ರಯುಕ್ತ, ಕಾಯ್ದೆಯಡಿ ಲೈಸೆನ್ಸ್ ಪಡೆದು ಮಾರುಕಟ್ಟೆ ಪ್ರಾಂಗಣಗಳ ಒಳಗಡೆ ವ್ಯಾಪಾರ ವಹಿವಾಟು ನಡೆಸುತ್ತಿರುವ ವರ್ತಕರಿಗೆ ಸಮಾನ ಅವಕಾಶ ಕಲ್ಪಿಸಿಕೊಡುವ ನಿಟ್ಟಿನಲ್ಲಿ ಸರ್ಕಾರದ ಆದೇಶ ಸಂಖ್ಯೆ: ಸಇ 306 ಎಂಆರ್‌ಇ 2020, |

....2

| | | |
|---|---|---|
| | | ದಿನಾಂಕ:02.01.2021 ರನ್ವಯ ಮಾರುಕಟ್ಟೆ ಸಮಿತಿಗಳು ಆಕರಿಸುತ್ತಿದ್ದ ಮಾರುಕಟ್ಟೆ ಶುಲ್ಕ/ಬಳಕೆದಾರರ ಶುಲ್ಕದ ದರವನ್ನು ಶೇ.1 ರಿಂದ ಶೇ.0.60(60 ಪೈಸೆ)ಕ್ಕೆ ನಿಗದಿಪಡಿಸಿ ಆದೇಶಿಸಲಾಗಿರುತ್ತದೆ. ತತ್ಪರಿಣಾಮವಾಗಿ ಮಾರುಕಟ್ಟೆ ಸಮಿತಿಗಳ ಆದಾಯವು ಗಣನೀಯವಾಗಿ ಕುಂಠಿತಗೊಂಡಿರುತ್ತದೆ.<br><br>ಪ್ರಸ್ತುತ ಈ ಹಿಂದಿನಂತೆ ಮಾರುಕಟ್ಟೆ ಕಾಯ್ದೆಗೆ ತಿದ್ದುಪಡಿಗೆ ಪ್ರಸ್ತಾಪಿಸಿದ್ದು, ಅಧಿಸೂಚಿತ ಕೃಷಿ ಉತ್ಪನ್ನಗಳ ಮಾರಾಟ ಹಾಗೂ ಖರೀದಿ ಪ್ರಕ್ರಿಯೆ ಮಾರುಕಟ್ಟೆ ಪ್ರಾಂಗಣಗಳಲ್ಲಿ ನಡೆಯಬೇಕೆಂದು ನಿರ್ಬಂಧ ವಿಧಿಸುವುದರಿಂದ ಹಾಗೂ ಮಾರುಕಟ್ಟೆ ಸಮಿತಿಗಳ ನಿಯಂತ್ರಣವನ್ನು ಮಾರುಕಟ್ಟೆ ಕ್ಷೇತ್ರ ವ್ಯಾಪ್ತಿಗೆ ಒಳಪಡಿಸುವುದರಿಂದ ಮಾರುಕಟ್ಟೆ ಸಮಿತಿಗಳ ಆದಾಯವು ಗಣನೀಯವಾಗಿ ಹೆಚ್ಚಿಗೆ ಆಗುವ ಸಾಧ್ಯತೆಗಳು ಇರುತ್ತವೆ. |
| ಇ) | ಎ.ಪಿ.ಎಂ.ಸಿಗಳಲ್ಲಿ ದಲ್ಲಾಳಿಗಳ ಹಾವಳಿ ಹೆಚ್ಚಾಗಿದ್ದು ಅಧಿಕಾರಿಗಳೂ ಶಾಮೀಲಾಗಿ ಹರಾಜು ಪ್ರಕ್ರಿಯೆಗಳಲ್ಲಿ ರೈತರಿಗೆ ಮೋಸವಾಗುತ್ತಿರುವುದನ್ನು ತಪ್ಪಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; | ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ 1966ರ ಕಲಂ 78 ರಡಿ ಸಮಿತಿಗಳಿಂದ ಲೈಸೆನ್ಸ್ ಪಡೆದು ಕಾರ್ಯನಿರ್ವಹಿಸುವ ದಲ್ಲಾಳಿಗಳ ಹೊಣೆಗಾರಿಕೆ ಹಾಗೂ ಜವಾಬ್ದಾರಿಗಳನ್ನು ನಿಗದಿಪಡಿಸಲಾಗಿರುತ್ತದೆ.<br><br>ರಾಜ್ಯದಲ್ಲಿ ಮಾರುಕಟ್ಟೆ ಸಮಿತಿಗಳ ಪ್ರಾಂಗಣಗಳಲ್ಲಿ ನಡೆಯುವ ವ್ಯಾಪಾರ ವಹಿವಾಟಿನಲ್ಲಿ ಪಾರದರ್ಶಕತೆ, ಇ-ಟೆಂಡರ್‌ನಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಖರೀದಿದಾರರು ಭಾಗವಹಿಸುವ ಮೂಲಕ ರೈತರು ಬೆಳೆದ ಕೃಷಿ ಉತ್ಪನ್ನಗಳಿಗೆ ಯೋಗ್ಯ ಹಾಗೂ ಸ್ಪರ್ಧಾತ್ಮಕ ಧಾರಣೆ ದೊರೆಯುವಂತೆ ಮಾಡಲು ರಾಜ್ಯದಲ್ಲಿನ 160 ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಲ್ಲಿ ಏಕೀಕೃತ ಮಾರುಕಟ್ಟೆ ವೇದಿಕೆ ಅಳವಡಿಸಿ ಆನ್‌ಲೈನ್ ಮಾರುಕಟ್ಟೆ ವ್ಯವಸ್ಥೆ ಕಾರ್ಯನಿರ್ವಹಣೆಗೆ ಅವಕಾಶ ಕಲ್ಪಿಸಲಾಗಿದೆ.<br><br>ರೈತರು ದಲ್ಲಾಳರಿಂದ ಶೋಷಣೆಗೆ ಒಳಗಾಗುತ್ತಿರುವ ಕುರಿತು ಸಮಿತಿಗೆ ದೂರು ನೀಡಿದಲ್ಲಿ ಸಮಿತಿಯು ಅಂತಹ ದಲ್ಲಾಳಿ ಲೈಸೆನ್ಸನ್ನು ರದ್ದುಪಡಿಸಿ ಕಾನೂನು ರೀತ್ಯ ಕ್ರಮ ಜರುಗಿಸಲಾಗುತ್ತದೆ ಹಾಗೂ ಅಂತಹ ಅಧಿಕಾರಿಗಳು ಶಾಮೀಲಾಗಿರುವ ಕುರಿತು ದೂರು ಸ್ವೀಕೃತಗೊಂಡಲ್ಲಿ ಅಂತಹವರ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುತ್ತದೆ. |
| ಈ) | ಎ.ಪಿ.ಎಂ.ಸಿ. ಗಳಲ್ಲಿ ಆಗುತ್ತಿರುವ ಮೋಸ ತಪ್ಪಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ; ಮತ್ತು ಈಗಿರುವ ಕಾಯಿದೆಗೆ ತಿದ್ದುಪಡಿ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ; ಉದ್ದೇಶವಿದ್ದಲ್ಲಿ, ಯಾವಾಗ ತಿದ್ದುಪಡಿ ಮಾಡಲಾಗುವುದು? | ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ 1966 ಹಾಗೂ ನಿಯಮಗಳು 1968 ರಡಿ ಮಾರುಕಟ್ಟೆ ಪ್ರಾಂಗಣಗಳಲ್ಲಿ ಅಧಿಸೂಚಿತ ಕೃಷಿ ಉತ್ಪನ್ನಗಳ ವ್ಯಾಪಾರ ವಹಿವಾಟು ಆನ್ ಲೈನ್ ಮೂಲಕ ನಡೆಯುತ್ತಿದ್ದು, ರೈತರಿಗೆ ಸ್ಪರ್ಧಾತ್ಮಕ ಹಾಗೂ ಯೋಗ್ಯ ಧಾರಣೆ ದೊರೆಯಲು ಅವಕಾಶ ಕಲ್ಪಿಸಲಾಗಿದ್ದು, ರೈತರ ಉತ್ಪನ್ನ ಮಾರಾಟವಾದ ತಕ್ಷಣವೇ ಮಾರಾಟ ಮೌಲ್ಯದ ಹಣ ಪಾವತಿಗೆ ವ್ಯವಸ್ಥೆ ಮಾಡಲಾಗಿದೆ. ಮಾರುಕಟ್ಟೆ ಸಮಿತಿಗಳಲ್ಲಿ |

| | | |
|---|---|---|
| | | ಚುನಾಯಿತ ಆಡಳಿತ ಮಂಡಳಿ ಕಾರ್ಯನಿರ್ವಹಿಸುತ್ತಿದ್ದು, ರೈತರಿಗೆ ತೂಕದಲ್ಲಿ ಮೋಸ, ತಕ್ಷಣ ಮಾರಾಟದ ನಂತರ ಹಣ ಪಾವತಿಗೆ ಹಾಗೂ ಇತರೆ ವಿಷಯಗಳಿಗೆ ಸಂಬಂಧಿಸಿದಂತೆ ವಿವಾದಗಳು ಉದ್ಭವಿಸಿದಲ್ಲಿ ಇತ್ಯರ್ಥಪಡಿಸಲು ಕ್ರಮ ವಹಿಸಲಾಗುತ್ತಿದೆ.<br><br>ಮುಂದುವರೆದು, ಪ್ರಸ್ತುತ ಈಗಿರುವ ಕಾಯ್ದೆಗೆ ತಿದ್ದುಪಡಿ ಮಾಡುವ ಉದ್ದೇಶ ಸರ್ಕಾರಕ್ಕಿದ್ದು, ಈ ಬಗ್ಗೆ ಮೇಲಿನ ಪ್ರಶ್ನೆ ಸಂಖ್ಯೆ (ಅ) ರಲ್ಲಿ ವಿವರ ಒದಗಿಸಿದೆ. |

ಸಂಖ್ಯೆ: ಸಿಓ 253 ಎಂಆರ್‌ಇ 2023

(ಶಿವಾನಂದ ಎಸ್. ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ
ಹಾಗೂ ಕೃಷಿ ಮಾರುಕಟ್ಟೆ ಸಚಿವರು